## ಕರ್ನಾಟಕ ಸರ್ಕಾರ

ಸಂಖ್ಯೆ ಆಇ 01 ಬಿಇಎಂ 2008

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ 21-10-2009

## ಸುತ್ತೋಲೆ

ರಾಜ್ಯದಲ್ಲಿ ಅತಿವೃಷ್ಟಿಯಿಂದ ಆದ ಪ್ರವಾಹ ಪೀಡಿತ ಕುಟುಂಬಗಳ ಪುನರ್‌ವಸತಿ ಕಲ್ಪಿಸಲು ಹಾಗೂ ರಸ್ತೆ, ಸೇತುವೆ ಮತ್ತು ಇತರೆ ಮೂಲಭೂತ ಸೌಲಭ್ಯಗಳನ್ನು ಸುಸ್ಥಿತಿಗೆ ತರಲು ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುವುದರಿಂದ, ಸರ್ಕಾರದ ವೆಚ್ಚದಲ್ಲಿ ಅದರಲ್ಲೂ ಯೋಜನೇತರ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವುದು ಅಗತ್ಯವಾಗಿದೆ. ಆದುದರಿಂದ, ಕೆಳಕಾಣಿಸಿದ ಮಿತವ್ಯಯ ಕ್ರಮಗಳನ್ನು ಪಾಲಿಸುವಂತೆ ನಿರ್ಧರಿಸಿ ಆದೇಶಿಸಿದೆ :

1. ಯಾವುದೇ ಹೊಸ ಹುದ್ದೆಗಳನ್ನು ಸೃಜಿಸುವ ಹಾಗೂ ಭರ್ತಿ ಮಾಡುವುದನ್ನು ಸಂಪೂರ್ಣವಾಗಿ ತಡೆಹಿಡಿಯಲಾಗಿದೆ.

2. ಕೆಲವು ವಿಶೇಷ ಪ್ರಕರಣಗಳಲ್ಲಿ ಅಂದರೆ, ಯೋಜನಾ ಕಾರ್ಯಕ್ರಮ ಅನುಷ್ಠಾನಗೊಳಿಸಬೇಕಾದಲ್ಲಿ ಅಥವಾ ಕೇಂದ್ರ ಸಹಾಯದ ಕಾರ್ಯಕ್ರಮವಾಗಿದ್ದಲ್ಲಿ, ಆಡಳಿತ ಇಲಾಖೆಯು ಆರ್ಥಿಕ ಇಲಾಖೆಯ ಪರಿಶೀಲನೆಗೆ ಅಂತಹ ಪ್ರಸ್ತಾವನೆಯನ್ನು ಕಳುಹಿಸತಕ್ಕದ್ದು.

3. ಹಳೆಯ ವಾಹನಗಳನ್ನು ಬದಲಾಯಿಸುವುದನ್ನು ಒಳಗೊಂಡಂತೆ ಹೊಸ ವಾಹನಗಳನ್ನು ಖರೀದಿಸುವುದನ್ನು ಸಂಪೂರ್ಣವಾಗಿ ತಡೆಹಿಡಿಯಲಾಗಿದೆ.

4. ಸಹಾಯಾನುದಾನಕ್ಕೆ ಒಳಪಡಿಸುವ ಯಾವುದೇ ಹೊಸ ಪ್ರಕರಣಗಳನ್ನು ಪರಿಗಣಿಸತಕ್ಕದ್ದಲ್ಲ.

5. 2009-10ನೇ ಸಾಲಿನಲ್ಲಿ ಇಲಾಖೆಗಳು ತಮ್ಮ ಯೋಜನೇತರ ವೆಚ್ಚದಲ್ಲಿ ಶೇಕಡ 10 ರಷ್ಟು ಕಡಿತ ಸಾಧಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

6. ವಿದೇಶಿ ನೆರವಿನ ಒಡಂಬಡಿಕೆಗೆ ಸಂಬಂಧಿಸಿದ ಪ್ರಕರಣಗಳನ್ನು ಹೊರತಾಗಿ, ಯಾವುದೇ ವಿದೇಶ ಪ್ರವಾಸವನ್ನು ಕರ್ನಾಟಕ ಸರ್ಕಾರದ ವೆಚ್ಚದಲ್ಲಿ ಕೈಗೊಳ್ಳಬಾರದು.

7. ತಾರಾ (ಸ್ಟಾರ್) ಹೋಟೆಲುಗಳಲ್ಲಿ ಅಧಿಕೃತ ಸಭೆಗಳನ್ನು / ಕಾರ್ಯಾಗಾರಗಳನ್ನು ನಡೆಸತಕ್ಕದ್ದಲ್ಲ.

8. ಸಚಿವರು ಮತ್ತು ಸಚಿವ ಸ್ಥಾನಮಾನ ಹೊಂದಿದ ಅಧಿಕಾರೇತರ ಸದಸ್ಯರು, ಸರ್ಕಾರದ ಮುಖ್ಯ ಕಾರ್ಯದರ್ಶಿ, ಅಪರ ಮುಖ್ಯ ಕಾರ್ಯದರ್ಶಿ, ಪ್ರಧಾನ ಕಾರ್ಯದರ್ಶಿ ದರ್ಜೆಯ ಅಧಿಕಾರಿಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಎಲ್ಲಾ ಅಧ್ಯಕ್ಷರುಗಳು ಮತ್ತು ಅಧಿಕಾರಿಗಳು ಮಿತವ್ಯಯ ದರ್ಜೆ (Economy Class) ಯಲ್ಲಿ ವಿಮಾನ ಪ್ರಯಾಣ ಮಾಡತಕ್ಕದ್ದು.

(ಮಾನ್ಯ ಮುಖ್ಯಮಂತ್ರಿಯವರಿಂದ ಅನುಮೋದಿತ)

ಸಹಿ:
(ಎಂ.ಆರ್. ಶ್ರೀನಿವಾಸಮೂರ್ತಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಆರ್ಥಿಕ ಇಲಾಖೆ

- - - - - -

**ಹಣಕಾಸು ನಿಯಂತ್ರಣಾಧಿಕಾರಿಗಳ ಕಛೇರಿ**
**ಕೃಷಿ ವಿಶ್ವವಿದ್ಯಾನಿಲಯ,**
**ಜಿಕೆವಿಕೆ, ಬೆಂಗಳೂರು – 560 065**

ಸಂಖ್ಯೆ ಹನಿಅ/ವಿಭಾಗ-3/ಯೋಜನೇತರ ಅನುದಾನ/2009-10 ದಿನಾಂಕ 20-11-2009

**ಸುತ್ತೋಲೆ ಸಂಖ್ಯೆ- 27**

ವಿಷಯ : ಯೋಜನೇತರ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಬಗ್ಗೆ.
ಉಲ್ಲೇಖ : 1. ಸರ್ಕಾರದ ಸುತ್ತೋಲೆ ಸಂಖ್ಯೆ ಆಇ 01 ಬಿಇಎಂ 2008 ದಿ:21-10-2009
2. ಉಪಕುಲಪತಿಗಳ ಅನುಮೋದನೆ ದಿನಾಂಕ 19-11-2009

ಸರ್ಕಾರದ ಸುತ್ತೋಲೆ ಸಂಖ್ಯೆ ಆಇ 01 ಬಿಇಎಂ 2008 ದಿನಾಂಕ 21-10-2009ನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದಲ್ಲಿ ಪಾಲಿಸಲು ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ರವಾನಿಸಲಾಗಿದೆ.

ಹಣಕಾಸು ನಿಯಂತ್ರಣಾಧಿಕಾರಿಗಳು

ಪ್ರತಿ :

1. ಕೃಷಿ ವಿಶ್ವವಿದ್ಯಾನಿಲಯದ ಎಲ್ಲಾ ಅಧಿಕಾರಿಗಳಿಗೆ
2. ಕೃಷಿ ವಿಶ್ವವಿದ್ಯಾನಿಲಯದ ಎಲ್ಲಾ ಯೋಜನಾ ಮುಖ್ಯಸ್ಥರಿಗೆ
3. ಕೃಷಿ ವಿಶ್ವವಿದ್ಯಾನಿಲಯದ ಎಲ್ಲಾ ಬಡವಾಡೆ ಅಧಿಕಾರಿಗಳಿಗೆ
4. ಕೃಷಿ ವಿಶ್ವವಿದ್ಯಾನಿಲಯದ ಎಲ್ಲಾ ಉಪ ಹಣಕಾಸು ನಿಯಂತ್ರಣಾಧಿಕಾರಿಗಳು / ಸಹಾಯಕ ಹಣಕಾಸು ನಿಯಂತ್ರಣಾಧಿಕಾರಿಗಳವರಿಗೆ.